ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 26–07–2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br><br>ಆರ್.ವಿ. ದೇಶಪಾಂಡೆ<br>ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಖಾತೆ ಸಚಿವರು | 27–7–2016<br>ಬುಧವಾರ<br>ಅಪರಾಹ್ನ<br>12–00 ಗಂಟೆಗೆ | ಸಮಿತಿ ಕೊಠಡಿ ಸಂಖ್ಯೆ 313 ಮೂರನೇ ಮಹಡಿ, ವಿಧಾನ ಸೌಧ ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಜುಲೈ 28 ರಿಂದ ಚೆನ್ನೈನಲ್ಲಿ ಕನ್ನಡ ಚಲನಚಿತ್ರೋತ್ಸವ

ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯಿಂದ ಕನ್ನಡ ಚಲನಚಿತ್ರೋತ್ಸವವನ್ನು ಜುಲೈ 28 ರಿಂದ 31 ರವರೆಗೆ ಚೆನ್ನೈನ ಅಲುವಾರ್ ಪೇಟ್‌ನ ಕಸ್ತೂರಿ ರಂಗ ರಸ್ತೆಯಲ್ಲಿರುವ ರಷ್ಯನ್ ಸೆಂಟರ್ ಆಫ್ ಸೈನ್ಸ್ ಅಂಡ್ ಕಲ್ಚರ್ ನಲ್ಲಿ ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಚಲನಚಿತ್ರೋತ್ಸವ ಉದ್ಘಾಟನಾ ಸಮಾರಂಭವು ಜುಲೈ 28 ರಂದು ಸಂಜೆ 5–30 ಗಂಟೆಗೆ ನಡೆಯಲಿದೆ. ಭಾರತೀಯ ಚಲನಚಿತ್ರ ರಂಗದ ಹಿರಿಯ ಕಲಾವಿದೆ ಪದ್ಮಭೂಷಣ ಡಾ: ಬಿ. ಸರೋಜಾ ದೇವಿ ಉದ್ಘಾಟಿಸುವರು. ಖ್ಯಾತ ಕಲಾವಿದೆ ಶ್ರೀಮತಿ ಸುಹಾಸಿನಿ ಮಣಿರತ್ನಂ ಆಶಯ ನುಡಿಗಳನ್ನಾಡುವರು.

ಮುಖ್ಯ ಅತಿಥಿಗಳಾಗಿ ದಕ್ಷಿಣ ಭಾರತ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಹೆಚ್.ಡಿ. ಗಂಗರಾಜು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್.ಆರ್. ವಿಶುಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ ಗೋವಿಂದು, ಇಂಡಿಯನ್ ಸಿನಿ ಅಪ್ರಿಸಿಯೇಷನ್ ಫೌಂಡೇಷನ್ ಅಧ್ಯಕ್ಷ ಎಸ್. ಕಣ್ಣನ್, ಚೈನ್ನೈ ಚಲನಚಿತ್ರ ಕಲಾವಿದರ ಸಂಘದ ಅಧ್ಯಕ್ಷ ನಾಜರ್, ಖ್ಯಾತ ಚಲನಚಿತ್ರ ನಟರಾದ ಯಶ್, ಕಾರ್ತೀಕ್, ಚೈನ್ನೈ ಚಲನಚಿತ್ರ ನಿರ್ಮಾಪಕ ಸಂಘದ ಅಧ್ಯಕ್ಷ ಎಸ್. ತನು, ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ವಿಕ್ರಮನ್, ಭಾರತೀಯ ಚಲನಚಿತ್ರ ಒಕ್ಕೂಟದ ಅಧ್ಯಕ್ಷ ಸಿ. ಕಲ್ಯಾಣ್, ಮಾಜಿ ಅಧ್ಯಕ್ಷ ರವಿ ಕೊಟ್ಟಾರಕರ್ ಹಾಗೂ ಚೈನ್ನೈ ಕರ್ನಾಟಕ ಸಂಘದ ಅಧ್ಯಕ್ಷ ನಾರಾಯಣ್ ಭಟ್ ಪಾಲ್ಗೊಳ್ಳುವರು. ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ಅವರು ಅಧ್ಯಕ್ಷತೆ ವಹಿಸುವರು.

ಉದ್ಘಾಟನಾ ಸಮಾರಂಭದ ಅಂಗವಾಗಿ ಕೇಂದ್ರ ಸರ್ಕಾರದ ಶ್ರೇಷ್ಠ ಪ್ರಾದೇಶಿಕ ಕನ್ನಡ ಚಿತ್ರ ಪ್ರಶಸ್ತಿ ಪುರಸ್ಕೃತಿ ತಿಥಿ ಚಿತ್ರವನ್ನು ಏರ್ಪಡಿಸಲಾಗಿದೆ. ಚಿತ್ರೋತ್ಸವದ ಅಂಗವಾಗಿ ಜುಲೈ 29 ರಿಂದ 31 ರವರೆಗೆ ಅರಿವು, ರಂಗಿತರಂಗ, ಯೂ ಟರ್ನ್, ಮಾರಿಕೊಂಡವರು, ಇಷ್ಟಕಾಮ್ಯ, 1 ನೇ ರ್‍ಯಾಂಕ್ ರಾಜು, ಗೋಧಿ ಮೈಬಣ್ಣ ಸಾಧಾರಣ ಮೈಕಟ್ಟು, ಕರ್ವ ಹಾಗೂ ಮಿ. ಅಂಡ್ ಮಿಸೆಸ್ ರಾಮಾಚಾರಿ ಚಿತ್ರಗಳು ಪ್ರದರ್ಶಿತಗೊಳ್ಳಲಿವೆ ಎಂದು ಅವರು ತಿಳಿಸಿದ್ದಾರೆ.

ಬಾಬು/ಕೆಎಂ

# ರಾಜ್ಯದಲ್ಲಿ ವಾಡಿಕೆ ಮಳೆ: 49.39 ಲಕ್ಷ ಹೆಕ್ಟೇರ್‌ನಲ್ಲಿ ಭಿತ್ತನೆ

**ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)**

ರಾಜ್ಯದ ಬಹುತೇಕ ಭಾಗಗಳಲ್ಲಿ ಈವರೆಗೆ ವಾಡಿಕೆಗಿಂತ ಉತ್ತಮ ಮಳೆಯಾಗಿದ್ದು ಪ್ರಸಕ್ತ ಸಾಲಿನಲ್ಲಿ 49.39 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭಿತ್ತನೆ ಕಾರ್ಯ ನಡೆದಿದ್ದು ಕಳೆದ 5 ವರ್ಷಗಳಿಗೆ ಹೋಲಿಸಿದರೆ ಭಿತ್ತನೆ ಪ್ರಮಾಣದಲ್ಲಿ ಗಣನೀಯ ಹೆಚ್ಚಳವಾಗಿದೆ ಎಂದು ಕೃಷಿ ಸಚಿವ ಕೃಷ್ಣಭೈರೇಗೌಡ ಅವರು ತಿಳಿಸಿದರು.

ವಿಕಾಸ ಸೌಧದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು ಮುಂಗಾರು ಹಂಗಾಮಿನಲ್ಲಿ 3 ಲಕ್ಷ ಟನ್ ಗುರಿ ಹೊಂದಲಾಗಿದೆ. ಇದೇ ರೀತಿ ಉತ್ತಮ ಮಳೆಯಾದರೆ ನಿರ್ಧಿಷ್ಟಗುರಿಗಿಂತ ಹೆಚ್ಚು ಇಳುವರಿ ಬರುವ ನಿರೀಕ್ಷೆಯಿದೆ ಎಂದರು.

ಈ ಬಾರಿ ಸುಮಾರು 37.40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭಿತ್ತನೆ ಕಾರ್ಯ ನಡೆಯಬೇಕಿದ್ದು ಆದರೆ ವಾಡಿಕೆಗಿಂತ ಶೇ. 150 ರಷ್ಟು ಹೆಚ್ಚು ಭಿತ್ತನೆ ಕಾರ್ಯ ನಡೆದಿದೆ.

ರಾಜ್ಯದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆ. ಈವರೆಗೆ ರಾಜ್ಯದಲ್ಲಿ 12.95 ಲಕ್ಷ ಟನ್ ರಸಗೊಬ್ಬರವನ್ನು ರೈತರಿಗೆ ಒದಗಿಸಲಾಗಿದೆ. ಜುಲೈ 25 ರವರೆಗೆ 3.46 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜ ಸರಬರಾಜು ಮಾಡಲಾಗಿದೆ ಎಂದು ಹೇಳಿದರು.

ಕಳೆದ ವರ್ಷ 175 ಕೃಷಿ ಯಂತ್ರ ಸರಬರಾಜು ಕೇಂದ್ರಗಳನ್ನು ತೆರೆಯುವ ಮೂಲಕ ಕಡಿಮೆ ಬಾಡಿಗೆ ದರದಲ್ಲಿ ರೈತರಿಗೆ ಕೃಷಿ ಯಂತ್ರೋಪಕರಣ ಒದಗಿಸಲಾಗಿತ್ತು. ಈ ಬಾರಿ 325 ಕೃಷಿ ಯಂತ್ರ ಸಂಸ್ಥೆಗಳನ್ನು ಪ್ರಾರಂಭಿಸುವ ಮೂಲಕ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಪ್ರತಿ ಕೇಂದ್ರ 70.00 ಲಕ್ಷ ರೂ. ಮೌಲ್ಯದ ಯಂತ್ರೋಪಕರಣ ಇಡಲಾಗುವುದು.

ಬೆಳೆ ವಿಮೆ ಹಣ ಪಡೆಯಲು ಹೆಸರು ನೋಂದಾಯಿಸಿಕೊಳ್ಳುವ ಅವಧಿಯನ್ನು ವಿಸ್ತರಣೆ ಮಾಡದಂತೆ ಕೇಂದ್ರ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಿದ್ದು ಅರ್ಹ ಫಲಾನುಭವಿ ರೈತರು ಜುಲೈ 30 ರೊಳಗೆ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕು. ಈವರೆಗೆ 4.26 ಲಕ್ಷ ರೈತರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ. ಕಳೆದ ವರ್ಷ 693 ಕೋಟಿ ರೂ. ಮುಂಗಾರು ಬೆಳೆ ಪರಿಹಾರ ಹಣ ಬಂದಿದು ಹಿಂಗಾರಿನ ರೂ. 200 ಕೋಟಿ ಕೇಂದ್ರ ಸರ್ಕಾರದಿಂದ ಬರಬೇಕಿದೆ. ರಾಜ್ಯ ಸರ್ಕಾರ 2150 ಕೋಟಿ ರೂ.ಗಳನ್ನು ಪರಿಹಾರ ರೂಪದಲ್ಲಿ ನೀಡಿದೆ. ಕಳೆದ ಸಾಲಿನಲ್ಲಿ ಸುಮಾರು 300 ಕೋಟಿ ರೂ. ಹೆಚ್ಚು ಹಣವನ್ನು ರೈತರಿಗೆ ಬೆಳೆವಿಮೆ ರೂಪದಲ್ಲಿ ನೀಡಲಾಗಿದೆ ಎಂದು ಸಚಿವರು ಹೇಳಿದರು.

ಬಾಬು/ಕೆಪಿಪಿ/ಕೆಎಂ

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಐ.ಎ.ಎಸ್, ಕೆ.ಎ.ಎಸ್ ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ

ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)

2016-17ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತವಾಗಿ ನೀಡುವ ಐ.ಎ.ಎಸ್, ಕೆ.ಎ.ಎಸ್ ಹಾಗೂ ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗೆ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ದಿನಾಂಕ: 24.07.2016 ರಂದು ಶಿಕ್ಷಣ ಇಲಾಖೆಯ ಕೇಂದ್ರೀಕೃತ ದಾಖಲಾತಿ ಘಟಕದ ಮೂಲಕ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು (ನ), ಮೈಸೂರು, ಬೆಳಗಾವಿ,

ಕಲಬುರ್ಗಿ, ಧಾರವಾಡ, ತುಮಕೂರು, ಶಿವಮೊಗ್ಗ, ಕೊಪ್ಪಳ ಮತ್ತು ದಕ್ಷಿಣ ಕನ್ನಡ ಒಟ್ಟು 9 ಜಿಲ್ಲೆಗಳ 81 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗಿದೆ.

ಐ.ಎ.ಎಸ್/ಕೆ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿಗಾಗಿ ಒಟ್ಟು 22,487 ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಗೆ 16,891 (ಶೇ.75.115) ಅಭ್ಯರ್ಥಿಗಳು ಹಾಜರಾಗಿದ್ದು, 5,596 (ಶೇ.24.885) ಅಭ್ಯರ್ಥಿಗಳು ಗೈರು ಹಾಜರಾಗಿರುತ್ತಾರೆ.

ಅದೇ ರೀತಿ ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಾಗಿ ಒಟ್ಟು 11,021 ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಗೆ 6,154 (ಶೇ.55.839) ಅಭ್ಯರ್ಥಿಗಳು ಹಾಜರಾಗಿದ್ದು, 4,867 (ಶೇ.44.161) ಅಭ್ಯರ್ಥಿಗಳು ಗೈರು ಹಾಜರಾಗಿದ್ದಾರೆ.

ಬಾಬು/ಕೆಎಂ

# ಜಿಟಿಟಿಸಿಯಲ್ಲಿ ತರಬೇತಿಗಾಗಿ ಅರ್ಜಿ

ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ರಾಜಾಜಿನಗರದ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ (ಜಿಟಿಟಿಸಿ) ಎಸ್.ಎಸ್.ಎಲ್.ಸಿ. ಯಲ್ಲಿ ಪಾಸಾದ ಬಿಪಿಎಲ್ ಕಾರ್ಡ್ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಮಉಚಿತ ವಸತಿಯೊಂದಿಗೆ, ಒಂದು ವರ್ಷದ ಉಚಿತ ವೃತ್ತಿಪರ ತರಬೇತಿಗೆ (ಟೂಲ್ ರೂಂ ಮೆಷಿನಿಸ್ಟ್ ಕೋರ್ಸ್) ಅರ್ಜಿಗಳನ್ನು ಆಹ್ವಾನಿಸಿದ್ದು, ಪ್ರಸ್ತುತ ಸೀಮಿತ ಅವಕಾಶಗಳು ಮಾತ್ರ ಲಭ್ಯವಿರುವುದರಿಂದ ಆಸಕ್ತ ಅರ್ಹ ಅಭ್ಯರ್ಥಿಗಳು ಮೇಲ್ಕಂಡ ಸಂಸ್ಥೆಯಲ್ಲಿ ಅರ್ಜಿಯನ್ನು ಪಡೆದು ದಿನಾಂಕ 1-8-2016 ರೊಳಗೆ ಸಲ್ಲಿಸಬಹುದಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ಬಾಬು/ಕೆಎಂ

# ವಾರ್ತಾ ಇಲಾಖೆಯಿಂದ ಆರೋಗ್ಯ ಇಲಾಖೆ ಕುರಿತ ಅರಿವು ಜಾಥಾ ಆಂದೋಲನ

ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ॥ ಶಾಲಿನಿ ರಜನೀಶ್ ಅವರು ಕರ್ನಾಟಕ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಹತ್ವಾಕಾಂಕ್ಷೆಯ ಯೋಜನೆಗಳ ಬಗ್ಗೆ ವಾರ್ತಾ ಇಲಾಖೆಯು ಹಮ್ಮಿಕೊಳ್ಳಲಿರುವ

ಪ್ರಚಾರಾಂದೋಲನ ಕಾರ್ಯಕ್ರಮಗಳ ಕುರಿತು ಇಲಾಖೆಯ ನಿರ್ದೇಶಕರು ಮತ್ತಿತರ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅನೇಕ ಹೊಸ ಯೋಜನೆಗಳನ್ನು ಹಮ್ಮಿಕೊಂಡಿದ್ದು ಅವುಗಳ ಕುರಿತು ಜನಸಾಮಾನ್ಯನಿಗೆ ಅರಿವು ಮೂಡಿಸುವ ಕೆಲಸ ತುರ್ತಾಗಿ ಮತ್ತು ಪರಿಣಾಮಕಾರಿಯಾಗಿ ಆಗಬೇಕು ಎಂದು ತಿಳಿಸಿದ ಅವರು ಈಗಾಗಲೇ ವಾರ್ತಾ ಇಲಾಖೆ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಜನಮನ ಜಾಥ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಜನಮನ ಜಾಥದಲ್ಲಿ ಮುಖ್ಯವಾಗಿ 104 ದೂರವಾಣಿ ಸಂಖ್ಯೆಯನ್ನು ಪ್ರಚಾರ ಮಾಡಬೇಕು, ಜನರು 24/7 ಯಾವುದೇ ಸಮಯದಲ್ಲಿ ಬೇಕಾದರು ಈ ಸಂಖ್ಯೆಗೆ ಫೋನ್ ಮಾಡಿ ತಮ್ಮ ಯಾವುದೇ ಆರೋಗ್ಯ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆಯಬಹುದು. ಈಗಾಗಲೇ ಕಳೆದ ಒಂದು ವರ್ಷದಲ್ಲಿ ಈ ನಂಬರಿಗೆ 65 ಸಾವಿರ ಜನ ಕರೆ ಮಾಡಿ ವಿವಿಧ ರೀತಿಯ ಅನಾರೋಗ್ಯಗಳ ಬಗ್ಗೆ ಮಾಹಿತಿ ಪಡೆದಿದ್ದಾರೆ. ಅದರಲ್ಲಿ ಮುಖ್ಯವಾಗಿ 2000 ಕ್ಕಿಂತ ಹೆಚ್ಚು ಆತ್ಮಹತ್ಯೆ ಮಾಡಿಕೊಳ್ಳಲೆತ್ನಿಸಿದ ಜನರನ್ನು ಕಾಪಾಡಿದ ಹಿರಿಮೆ ನಮ್ಮ ಇಲಾಖೆಯದ್ದು, ನಮ್ಮಲ್ಲಿ ಮಾನಸಿಕ ತಜ್ಞರು ಸಹ ಇದ್ದಾರೆ, ಈ ನಂಬರಿನಲ್ಲಿ ಯಾವುದೇ ಸಮಸ್ಯೆಗಳ ಕುರಿತು ಸಮಾಲೋಚಿಸುವ ತಜ್ಞರ ತಂಡ ನಮ್ಮಲ್ಲಿದೆ ಎಂದರು.

ಪ್ರತಿ 20 ಕಿ.ಮೀ ವ್ಯಾಪ್ತಿಗೆ ಒಂದರಂತೆ ಸರಕಾರದ ಅಂಬುಲೆನ್ಸ್‌ಗಳಿದ್ದು ಜನ ಸಾಮಾನ್ಯರು ಅದರ ಉಪಯೋಗ ಪಡೆದುಕೊಳ್ಳಬೇಕು, ಬಡ ಜನರಿಗಾಗಿ ಸರಕಾರಿ ಆಸ್ಪತ್ರೆಗಳಲ್ಲಿ ಉಚಿತ ಔಷಧಗಳು ಲಭ್ಯವಿದ್ದು, ಅದನ್ನು ಪಡೆಯುವುದು ಜನರ ಹಕ್ಕಾಗಿರುತ್ತದೆ. ಆ ಬಗ್ಗೆ ಅರಿವು ಮೂಡಿಸುವುದು ಜನಮನ ಜಾಥದ ಮುಖ್ಯ ಉದ್ದೇಶ, ಸರಕಾರದ ಮಹತ್ವಕಾಂಕ್ಷೆಯ ಆಯುಶ್ ಯೋಜನೆ ಕುರಿತು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಬೇಕು, ಜನರು ತಮ್ಮ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡಲ್ಲಿ ಅನಾರೋಗ್ಯದಿಂದ ತಮ್ಮನ್ನು ತಾವು ಕಾಪಾಡಿಕೊಳ್ಳಬಹುದು ಎಂದು ಹೇಳಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಮಾತನಾಡಿ ವಾರ್ತಾ ಇಲಾಖೆ ಜಿಲ್ಲಾ ಕಚೇರಿಗಳು ಮತ್ತು ಆರೋಗ್ಯ ಕೇಂದ್ರಗಳ ಸಹಯೋಗದಲ್ಲಿ ಜಿಲ್ಲೆಗೆರೆಡು ಕಲಾ ತಂಡಗಳು ಮತ್ತು ವಾಹನಗಳ ಮೂಲಕ ದಿನಕ್ಕೆರಡೂ ಹಳ್ಳಿಗಳಂತೆ ಒಂದು ವಾರಗಳ ಕಾಲ ಜಾಥ ನಡೆಸಲಿದ್ದು ಕೊನೆಯ ದಿನ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ವಾರ್ತಾ ಇಲಾಖೆ ಈ ಯೋಜನೆಯ ಕುರಿತು ಸಂಪೂರ್ಣ ಮಾಹಿತಿ ಹೊಂದಿದ್ದು

ಆರೋಗ್ಯ ಇಲಾಖೆ ಸಹಯೋಗದಲ್ಲಿ ಯಶಸ್ವಿ ಕಾರ್ಯಕ್ರಮವನ್ನಾಗಿಸಲು ಶ್ರಮಿಸಲಿದೆ ಎಂದರು. ಸಭೆಯಲ್ಲಿ ಆಯುಶ್ ಇಲಾಖೆ ಸೇರಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಾರ್ತಾ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

ಬಾಬು/ಜಡಿ/ಇಂದು/ಕೆಎಂ

# ಅಧಿಕಾರೇತರ ಸದಸ್ಯರ ನೇಮಕ

**ಬೆಂಗಳೂರು, ಜುಲೈ 26 (ಕರ್ನಾಟಕ ವಾರ್ತೆ)**

ಕರ್ನಾಟಕ ಮಾಧ್ಯಮ ಅಕಾಡೆಮಿಗೆ ರಾಯಚೂರು ಸುದ್ದಿ ಮೂಲ ಪತ್ರಿಕೆಯ ಮುಖ್ಯ ವರದಿಗಾರ ಟಿ. ವೆಂಕಟಸಿಂಗ್ ಅವರನ್ನು ಅಧಿಕಾರೇತರ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಬಾಬು/ಕೆಎಂ